ಪತ್ರಿಕಾ ತುಣುಕುಗಳು
**PAPER CLIPPINGS**

12

ಇಲಾಖೆ / ವಿಷಯ : DEPARTMENT / SUBJECT: ವಸತಿ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 21/8/2020

# ಕೊಳೆಗೇರಿ ನಿವಾಸಿಗಳಿಗೆ ಹಬ್ಬ

## ಹಕ್ಕುಪತ್ರ ನೀಡಲು ಸಂಪುಟ ಒಪ್ಪಿಗೆ । 3.13 ಲಕ್ಷ ಕುಟುಂಬಗಳಿಗೆ ಲಾಭ
## ಐತಿಹಾಸಿಕ ನಿರ್ಣಯ ಎಂದು ಬಣ್ಣಿಸಿದ ವಸತಿ ಸಚಿವ ವಿ. ಸೋಮಣ್ಣ

■ **ವಿಕ ಸುದ್ದಿಲೋಕ** ಬೆಂಗಳೂರು 21/8/20

ರಾಜ್ಯದ ಕೊಳೆಗೇರಿ ನಿವಾಸಿಗಳಿಗೆ ಹಕ್ಕುಪತ್ರ ನೀಡುವ ಸಂಬಂಧ ವಸತಿ ಇಲಾಖೆಯ ಮಹತ್ವದ ಪ್ರಸ್ತಾವನೆಗೆ ಸಚಿವ ಸಂಪುಟ ಸಭೆ ಅನುಮೋದನೆ ನೀಡುವ ಮೂಲಕ ಐತಿಹಾಸಿಕ ನಿರ್ಣಯ ಕೈಗೊಂಡಿದೆ ಎಂದು ವಸತಿ ಸಚಿವ ವಿ.ಸೋಮಣ್ಣ ಹೇಳಿದ್ದಾರೆ.



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯೂ ಸೇರಿದಂತೆ ರಾಜ್ಯದ ವಿವಿಧ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆ ವ್ಯಾಪ್ತಿಯ ಸರಕಾರಿ ಹಾಗೂ ಸ್ಥಳೀಯ ಸಂಸ್ಥೆಗಳ ಮಾಲೀಕತ್ವದಲ್ಲಿರುವ ಸುಮಾರು 6745 ಎಕರೆ ಜಮೀನಿನಲ್ಲಿರುವ 1873 ಕೊಳಚೆ ಪ್ರದೇಶಗಳ 3.13 ಲಕ್ಷ ಕುಟುಂಬಗಳಿಗೆ ಹಕ್ಕು ಪತ್ರ ನೀಡುವ ಪ್ರಸ್ತಾವನೆ ಇದಾಗಿದ್ದು, ರಾಜ್ಯದ ಸುಮಾರು 16 ಲಕ್ಷ ಕೊಳೆಗೇರಿ ನಿವಾಸಿಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

ಬಿಬಿಎಂಪಿ ವ್ಯಾಪ್ತಿಯಲ್ಲೇ 683 ಎಕರೆ ಸರಕಾರಿ ಜಾಗದಲ್ಲಿ 239 ಕೊಳಚೆ ಪ್ರದೇಶಗಳಿದ್ದು, ಸುಮಾರು 50 ಸಾವಿರ ಕುಟುಂಬಗಳು ವಾಸಿಸುತ್ತಿವೆ. ವಸತಿ, ನಗರಾಭಿವೃದ್ಧಿ, ಪೌರಾಡಳಿತ ಹಾಗೂ ಕಂದಾಯ ಇಲಾಖೆಯ ವಿವಿಧ ಹಂತದ ಅಧಿಕಾರಿಗಳೊಂದಿಗೆ ನಿರಂತರ ಚರ್ಚಿಸಿ, ಸಭೆ ನಡೆಸಿ ಈ ಪ್ರಸ್ತಾವನೆಗೆ ಒಂದು ತಾರ್ಕಿಕ ಅಂತ್ಯ ನೀಡಿರುವುದಕ್ಕೆ ತಮಗೆ ವೈಯಕ್ತಿಕವಾಗಿ ಸಂತೋಷ ತಂದಿದೆ ಎಂದು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಪ್ರಧಾನಿ ಮೋದಿಯವರ ಆಶಯವಾದ 'ಸರ್ವರಿಗೂ ಸೂರು' ಎಂಬ ಕಲ್ಪನೆಯನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಸಮಾಜದ ಅತ್ಯಂತ ಕೆಳ ಹಾಗೂ ದುರ್ಬಲ ವರ್ಗದ ಜನರೇ ಹೆಚ್ಚಾಗಿ ವಾಸಿಸುವ ಕೊಳಚೆ ಪ್ರದೇಶದ ನಿವಾಸಿಗಳ ಬಹುದಿನದ ಕನಸು ಈಡೇರಿಸುವ ಐತಿಹಾಸಿಕ ನಿರ್ಣಯ ಕೈಗೊಂಡಿದ್ದಕ್ಕಾಗಿ ಸಿಎಂ ಯಡಿಯೂರಪ್ಪ, ಸಂಪುಟ ಸಹೋದ್ಯೋಗಿಗಳು ಹಾಗೂ ಮುಖ್ಯ ಕಾರ್ಯದರ್ಶಿಯವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ಕಳೆದ ವರ್ಷದ ಆಗಸ್ಟ್ 20 ರಂದು ಯಡಿಯೂರಪ್ಪ ಸಂಪುಟದಲ್ಲಿ ಸೋಮಣ್ಣ ಅವರು ಸಚಿವರಾಗಿ ಅಧಿಕಾರವಹಿಸಿಕೊಂಡು ಗುರುವಾರಕ್ಕೆ ಸರಿಯಾಗಿ ಒಂದು ವರ್ಷ ಪೂರ್ಣಗೊಂಡ ಸಂದರ್ಭದಲ್ಲಿಯೇ ಕೊಳೆಗೇರಿ ನಿವಾಸಿಗಳ ಬಹುದಿನದ ಕನಸು ಈಡೇರಿಸುವ ಐತಿಹಾಸಿಕ ನಿರ್ಣಯವನ್ನು ಸಂಪುಟ ಸಭೆ ಕೈಗೊಂಡಿದ್ದಕ್ಕೆ ಸೋಮಣ್ಣ ಹರ್ಷ ವ್ಯಕ್ತಪಡಿಸಿದಾರೆ.

## ಸದನದಲ್ಲಿ ಮಂಡನೆ

**ಬೆಂಗಳೂರು:** ಆಡಳಿತಾತ್ಮಕ ದೃಷ್ಟಿಯಿಂದ ಸರಕಾರ ಈಗಾಗಲೇ ಜಾರಿಗೆ ತಂದಿರುವ ಮಹತ್ವದ ಸುಗ್ರೀವಾಜ್ಞೆಗಳನ್ನು ವಿಧೇಯಕ ರೂಪದಲ್ಲಿ ಮುಂಬರುವ ವಿಧಾನ ಮಂಡಲದಲ್ಲಿ ಮಂಡಿಸಲಿದೆ ಎಂದು ಸಚಿವ ಜೆ.ಸಿ ಮಾಧುಸ್ವಾಮಿ ತಿಳಿಸಿದರು.



ಸಂಪುಟ ಸಭೆಯ ಮಾಹಿತಿ ನೀಡಿದ ಅವರು, ''ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಾಗರಿಕ ನಿವೇಶನ ಮರು ಹಂಚಿಕೆ, ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, ಕರ್ನಾಟಕ ಭೂ ಸುಧಾರಣೆ, ಭೂ ಕಬಳಿಕೆ ನಿಷೇಧ ಕಾಯಿದೆ, ಭೂ ಮಂಜೂರು ತಿದ್ದುಪಡಿ, ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ಹಾಗೂ ಕೈಗಾರಿಕಾ ಸೌಲಭ್ಯ ತಿದ್ದುಪಡಿ ವಿಧೇಯಕಕ್ಕೆ ಅನುಮತಿ ನೀಡಲಾಗಿದ್ದು, ಇವುಗಳನ್ನು ಸದನದಲ್ಲಿ ಮಂಡಿಸಲಾಗುತ್ತದೆ,'' ಎಂದರು.

ಸಾಂದರ್ಭಿಕ ಚಿತ್ರ



## ಕ್ರಿಮಿನಲ್ ಪ್ರಕರಣಗಳು ವಾಪಸ್

**ರಾಜಕೀಯ ಹಾಗೂ ಧಾರ್ಮಿಕ ಹಿನ್ನೆಲೆಯಲ್ಲಿ ನಡೆದ ಗಲಭೆ ಪ್ರಕರಣಗಳಿಗೆ ಸಂಬಂಧಪಟ್ಟಂತೆ 64 ಕ್ರಿಮಿನಲ್ ಪ್ರಕರಣಗಳನ್ನು ವಾಪಸ್ ಪಡೆಯಲು ಸಂಪುಟ ಒಪ್ಪಿಗೆ ನೀಡಿದೆ. ಬೆಳಗಾವಿ ಹಾಗೂ ಮೈಸೂರು ಜಿಲ್ಲೆ ಹುಣಸೂರಿನಲ್ಲಿ ನಡೆದ ಘಟನೆಗಳಿಗೆ ಸಂಬಂಧಪಟ್ಟ ಪ್ರಕರಣಗಳು ಈ ಪಟ್ಟಿಯಲ್ಲಿವೆ. ಆದರೆ ಈ ಪ್ರಕರಣಗಳು ಸಂಘ-ಪರಿವಾರ ಸೇರಿದಂತೆ ಇತರೆ ಸಂಸ್ಥೆಗಳಿಗೆ ಸಂಬಂಧಪಟ್ಟಿದ್ದಲ್ಲ. ಮಂಗಳೂರು ಹಾಗೂ ಕರಾವಳಿ ಜಿಲ್ಲೆಗಳ ಪ್ರಕರಣಗಳೂ ಸೇರಿಲ್ಲ ಎಂದು ಸಚಿವ ಮಾಧುಸ್ವಾಮಿ ಸ್ಪಷ್ಟಪಡಿಸಿದ್ದಾರೆ.**

## ಸಂಪುಟದ ಇತರ ತೀರ್ಮಾನಗಳು

- **ಸಹಕಾರ ಸಂಘಗಳು, ಸಹಕಾರ ಬ್ಯಾಂಕ್‌ಗಳ ಚುನಾವಣೆಯನ್ನು ಡಿಸೆಂಬರ್‌ವರೆಗೆ ಮುಂದೂಡಿಕೆ. ಆಡಳಿತಾಧಿಕಾರಿ ನೇಮಕ ಮಾಡುವ ಆದೇಶಕ್ಕೆ ಅನುಮತಿ.**
- **ದಿಲ್ಲಿ ಕರ್ನಾಟಕ ಭವನವನ್ನು ಆತಿಥೇಯ ಸಂಸ್ಥೆ ಎಂದು ಪರಿಗಣಿಸಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಯೂ ಸೇರಿ 32 ಹುದ್ದೆ ಭರ್ತಿಗೆ ಕ್ರಮ. ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವವರಿಗೆ 25ರಷ್ಟು ಕೃಪಾಂಕ ನೀಡಿ ಭರ್ತಿಗೆ ಕ್ರಮ.**
- **ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ಹಾಗೂ ನಂತರದ ವಿದ್ಯಾರ್ಥಿ ನಿಲಯ, ಆಶ್ರಮ ಶಾಲೆಗಳಿಗೆ ಊಟೋಪಚಾರ ಹಾಗೂ ಅಗತ್ಯ ಕಿಟ್ ಪೂರೈಕೆಗೆ 65 ಕೋಟಿ ರೂ. ನಿಗದಿ.**
- **ನಗರಸಭೆ, ಪುರಸಭೆ, ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷ ಸ್ಥಾನಗಳ ಮೀಸಲು ನಿಗದಿಗೆ ಮಾರ್ಗಸೂಚಿ ನಿಗದಿ.**
- **ಚಿಕ್ಕಮಗಳೂರು ಜಿಲ್ಲಾ ಸಂಕೀರ್ಣ ಕಟ್ಟಡ ನಿರ್ಮಾಣಕ್ಕಾಗಿ ಉಪಯೋಗಿಸಿಕೊಂಡಿರುವ 4 ಎಕರೆ ಜಮೀನಿಗೆ ಪರ್ಯಾಯವಾಗಿ ಭೂ ಮಾಲೀಕರಿಗೆ 6 ಎಕರೆ ಜಮೀನು ನೀಡುವುದಕ್ಕೆ ಒಪ್ಪಿಗೆ.**
- **ಉಡುಪಿ ಜಿಲ್ಲೆ ಆಮುಂಜೆ ಪೆರಂಪಳ್ಳಿ ಸ್ವರ್ಣಾ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣಕ್ಕೆ 16 ಕೋಟಿ ರೂ. ಮಂಜೂರು.**
- **ಎಸ್‌ಸಿಪಿ / ಟಿಎಸ್‌ಪಿ ಕಾರ್ಯಕ್ರಮದ ಅನ್ವಯ 14 ಸಂಚಾರಿ ಆರೋಗ್ಯ ಘಟಕ ಸೇರಿ ಒಟ್ಟು 78 ಘಟಕಗಳನ್ನು 5 ವರ್ಷದ ಅವಧಿಗೆ ಮುಂದುವರಿಕೆ.**
- **ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಷೇರು ಬಂಡವಾಳವನ್ನು 1000 ಕೋಟಿಯಿಂದ 1250 ಕೋಟಿ ರೂ.ಗೆ ಹೆಚ್ಚಿಸಲು ನಿರ್ಧಾರ.**
- **ಶಿವಮೊಗ್ಗ- ಕುಂಸಿ ರೈಲು ನಿಲ್ದಾಣದ ಮೇಲ್ಸೇತುವೆ ನಿರ್ಮಾಣಕ್ಕೆ 15 ಕೋಟಿ, ಭದ್ರಾವತಿ-ಶಿವಮೊಗ್ಗ ಸೇರಿದಂತೆ ಶಿವಮೊಗ್ಗ ಜಿಲ್ಲೆಯ ನಾನಾ ರೈಲು ಕ್ರಾಸಿಂಗ್ ಹಾಗೂ ಮೇಲ್ಸೇತುವೆ ನಿರ್ಮಾಣಕ್ಕೆ 13 ಕೋಟಿ ರೂ. ಬಿಡುಗಡೆಗೆ ಒಪ್ಪಿಗೆ.**
- **ಚಿಕ್ಕಮಗಳೂರು ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ಹೊರ ರೋಗಿ ವಿಭಾಗದ ಕಾಮಗಾರಿಗಳಿಗೆ 174 ಕೋಟಿ ರೂ. ಮಂಜೂರು.**
- **ಕೊಡಗಿನ ಪ್ರವಾಹ ಸಂತ್ರಸ್ತರಿಗೆ ಎರಡು ಸ್ಥಳಗಳಲ್ಲಿ ಅತಿ ಶೀಘ್ರವಾಗಿ ಮನೆ ಕಟ್ಟಿಕೊಡಲು ನಿರ್ಧಾರ. 16 ಕೋಟಿ ರೂ. ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಬಿಡುಗಡೆ.**
- **ರೈತರು ಸ್ವಾಧೀನದಲ್ಲಿಟ್ಟುಕೊಂಡಿರುವ ಬಿ ಕರಾಬ್ ಜಾಗವನ್ನು ಮಾರುಕಟ್ಟೆ ದರದಲ್ಲಿ ಮಂಜೂರು ಮಾಡಲು ನಿರ್ಧಾರ. ಇದಕ್ಕಾಗಿ ಆಕ್ಷೇಪ ಸಲ್ಲಿಸಲು ಇದ್ದ 90 ದಿನಗಳ ಕಾಲಾವಕಾಶ 30 ದಿನಗಳಿಗೆ ಇಳಿಕೆ.**
- **94 ಬಿ ಅನ್ವಯ ಬಗರ್ ಹುಕುಂ ಜಮೀನು ಮಂಜೂರು ಮಾಡುವುದಕ್ಕೆ ಇನ್ನೂ 2 ವರ್ಷಗಳ ಕಾಲಾವಕಾಶ ನೀಡಲು ನಿರ್ಧಾರ. ಫಾರ್ಮ್ ನಂಬರ್ 50ರ ಪ್ರಕಾರ ಅರ್ಜಿ ಸಲ್ಲಿಸುವುದಕ್ಕೆ ಮತ್ತೆ ಅವಕಾಶ.**
- **ಶಿವಮೊಗ್ಗ ಉತ್ತರ ಭಾಗದ ವರ್ತುಲ ರಸ್ತೆ ನಿರ್ಮಾಣಕ್ಕೆ ಭೂಸ್ವಾಧೀನ ಕಾರ್ಯಕ್ಕೆ 100 ಕೋಟಿ ರೂ. ನಿಗದಿ.**
- **ಚಿಕ್ಕನಾಯಕನಹಳ್ಳಿ ಮಿನಿ ವಿಧಾನಸೌಧ ನಿರ್ಮಾಣಕ್ಕೆ 16 ಕೋಟಿ ರೂ. ನಿಗದಿ.**